**ಪ್ರಧಾನ** ಸಿ.ಜೆ. ಮತ್ತು ಜೆ ಎಂಎಫ್‌ಸಿ ನ್ಯಾಯಾಲಯ, ಮದ್ದೂರು

ಸಾಕ್ಷಿಯ ಹೆಸರು ಲಕ್ಷ್ಮಣ
ತಂದೆ/ ಗಂಡನ ಹೆಸರು :- ಪುಟ್ಟಸ್ವಾಮಿ
ವಯಸ್ಸು :- 52 ವರ್ಷ
ಉದ್ಯೋಗ :- ಖಾಸಗಿ
ವಾಸಸ್ಥಳ :- ಮಾದಪುರ

(ಸಾಕ್ಷಿಗೆ ದಿನಾಂಕಃ 06-01-2026 ರಂದು ಪ್ರಮಾಣ ವಚನ ಬೋಧಿಸಲಾಯಿತು)

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ನಿಪಿ-2 ಮತ್ತು 3 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿ ಸಹಿಯನ್ನು ನಿಪಿ-2 ಸಿ ಮತ್ತು ನಿಪಿ-3 ಸಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಿಡಘಟ್ಟ ಗ್ರಾಮದಲ್ಲಿ ಸುಮಾರು 1 ವರ್ಷಗಳ ಹಿಂದೆ, ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿದ್ದು ಅದರಲ್ಲಿ ಏನು ಬರೆದಿದೆ ನನಗೆ ಗೊತ್ತಿಲ್ಲ. ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆಂದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ನನ್ನ ಮುಂದೆ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

ಪಾಟೀ ಸವಾಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ದಿ 04-04-2023 ರಂದು ಬೆಳಿಗ್ಗೆ 8.00-8.40 ಗಂಟೆ ಸಮಯದಲ್ಲಿ ವಿವಾದಿತ ಸ್ಥಳದಲ್ಲಿ ನಿಮ್ಮ ಮತ್ತು ಚಾಸಾ-3 ರವರ ಸಮಕ್ಷಮ ಚಾಸಾ-1 ರವರು ನಿಪಿ-2 ರಂತೆ ಸ್ಥಳ ಮಹಜರ್ ಮಾಡಿ ನಿಮ್ಮ ಮತ್ತು ಚಾಸಾ-3 ರವರ ಸಮಕ್ಷಮ ವಿವಾದಿತ ಮದ್ಯವನ್ನು ಅಮಾನತ್ತುಪಡಿಸಿಕೊಂಡು, ನನ್ನ ಸಹಿ ಪಡೆಯಲಾಗಿದೆ ಎಂದರೆ ಸರಿಯಲ್ಲ. ನಂತರ ಅದೇದಿನ ಮದ್ಯವನ್ನು ಅಮಾನತ್ತುಪಡಿಸಿಕೊಂಡ ಮಾದರಿ ಸೀಲ್ ನ ನಕಲಾದ ನಿಪಿ-3 ಕ್ಕೆ ನಿಮ್ಮ ಸಹಿ ಪಡೆಯಲಾಗಿದೆ ಎಂದರೆ ಸರಿಯಲ್ಲ.

ಆ ಬಗ್ಗೆ ದಿಃ 02-08-2023 ರಂದು ನಾನು ಠಾಣೆಗೆ ಹಾಜರಾಗಿ " ದಿಃ 04-04-2023 ರಂದು ---------- ನನ್ನ ಸಹಿ ಪಡೆದರು ಎಂದು ಹೇಳಿಕೆ '' ನೀಡಿದ್ದೇನೆಂದರೆ ಸರಿಯಲ್ಲ. ಸದರಿ ನಿರಾಕರಣೆಯ ಭಾಗವನ್ನು ಸಂಪೂರ್ಣವಾಗಿ ಸಾಕ್ಷಿಗೆ ಓದಿ ಹೇಳಿದ್ದು ನಿರಾಕರಿಸಿದ ಮೇರೆಗೆ ಸದರಿ ಹೇಳಿಕೆಯ ಭಾಗವನ್ನು ನಿಪಿ-9 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ನಿಪಿ-2, 3 ಮತ್ತು 9 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿದ್ದರೂ ಕೂಡ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಏನು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಒ

(ಶ್ರೀಮತಿ ನಳಿನ ಎಸ್.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮದ್ದೂರು